# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 17.01.2026 ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಮಂಗಳೂರು ವಿಶ್ವವಿದ್ಯಾನಿಯದ** ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ **ಶೈಕ್ಷಣಿಕ ಮಂಡಳಿಯ** 2025-26ನೇ ಸಾಲಿನ ದ್ವಿತೀಯ **ವಿಶೇಷ ಸಭೆಯ ನಡವಳಿಗಳು.**

ಉಪಸ್ಥಿತರು:

ಅನುಪಸ್ಥಿತರು:

## <u>ಪ್ರಾರಂಭಿಕ</u>

- ಪ್ರಾರಂಭದಲ್ಲಿ ಕುಲಸಚಿವರು, ಮಾನ್ಯ ಕುಲಪತಿಯವರನ್ನು, ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳನ್ನು, ಎಲ್ಲಾ ನಿಕಾಯದ ಡೀನರುಗಳನ್ನು, ಶೈಕ್ಷಣಿಕ ಮಂಡಳಿಯ ಸದಸ್ಯರುಗಳನ್ನು, ವಿಶೇಷ ಆಹ್ವಾನಿತರುಗಳನ್ನು, ಪತ್ರಿಕಾ ಮಾಧ್ಯಮ ಮಿತ್ರರನ್ನು ಹಾಗೂ ವಿಶ್ವವಿದ್ಯಾನಿಲಯದ ಅಧಿಕಾರಿಗಳನ್ನು ಮತ್ತು ಆಡಳಿತ ಸಿಬ್ಬಂದಿಗಳನ್ನು ಸಭೆಗೆ ಸ್ವಾಗತಿಸಿ, ಸಭೆಯನ್ನು ಮುಂದುವರೆಸುವಂತೆ ಕುಲಪತಿಯವರನ್ನು ವಿನಂತಿಸಿದರು.

  ಕುಲಪತಿಯವರು ಸಭೆಯಲ್ಲಿ ನೆರೆದ ಎಲ್ಲರನ್ನು ಮತ್ತೊಮ್ಮೆ ಸಭೆಗೆ ಸ್ವಾಗತಿಸಿ ಸಭೆಯನ್ನು ಮುಂದುವರಿಸಿದರು.

I. **ದಿನಾಂಕ 22.12.2025ರಂದು ಆನ್‌ಲೈನ್ ಮೂಲಕ ನಡೆದ ಶೈಕ್ಷಣಿಕ ಮಂಡಳಿಯ 2025-26ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.**

- ದೃಢೀಕರಿಸಲಾಯಿತು-.

II. **ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆಗೊಂಡ ಪರಿನಿಯಮ / ವಿನಿಯಮಗಳು**

- ಯಾವುದೂ ಇಲ್ಲ -

**III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:**

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಶೈ.ಮ.ವಿ.ಸ.2:1 (2025-26)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಹೊಸ ಶಾಶ್ವತ / ಶಾಶ್ವತ ಸಂಯೋಜನೆ ಮುಂದುವರಿಕೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಕಾರ್ಯಸೂಚಿಯ ಕ್ರಮ ಸಂ. 1 ರಿಂದ 28 ರವರೆಗೆ ತಿಳಿಸಲಾದ ಕಾಲೇಜುಗಳ ಶಾಶ್ವತ ಸಂಯೋಜನೆ ಮುಂದುವರಿಕೆಗೆ ಹಾಗೂ ಕ್ರಮ ಸಂ. 1 ರಿಂದ 11 ರವರೆಗೆ ತಿಳಿಸಲಾದ ಕಾಲೇಜುಗಳ ಹೊಸ ಶಾಶ್ವತ ಸಂಯೋಜನೆಗೆ ಸಂಬಂಧಿಸಿದಂತೆ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಶೈ.ಮ.ವಿ.ಸ. 2:2 (2025-26)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಮುಂದುವರಿಕೆ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಕ್ರಮ ಸಂ. 1 ರಿಂದ 131 ರವರೆಗೆ ತಿಳಿಸಲಾದ ಕಾಲೇಜುಗಳ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಮುಂದುವರಿಕೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲು ನಿರ್ಣಯಿಸಲಾಯಿತು

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಶೈ.ಮ.ವಿ.ಸ.2:3 (2025-26)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ವಿಸ್ತರಣಾ ಸಂಯೋಜನೆ (ಹೊಸ ಕಾರ್ಯಕ್ರಮ/ಹೆಚ್ಚುವರಿ ವಿಭಾಗ) ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಕ್ರಮ ಸಂ. 1 ರಿಂದ 21 ರವರೆಗೆ ತಿಳಿಸಲಾದ ಕಾಲೇಜುಗಳ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು

ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ವಿಸ್ತರಣಾ ಸಂಯೋಜನೆಗೆ (ಹೊಸ ಕಾರ್ಯಕ್ರಮ/ಹೆಚ್ಚುವರಿ ವಿಭಾಗ) ಮಂಜೂರಾತಿ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಶೈ.ಮ.ವಿ.ಸ.2:4 (2025-26)

ವಿಷಯ: ಶ್ರೀ ವೆಂಕಟರಮಣ ಮಹಿಳಾ ಕಾಲೇಜು, ಕಾರ್ಕಳ ಎಂಬ ವಿದ್ಯಾಸಂಸ್ಥೆಯ ಹೆಸರು ಬದಲಾವಣೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಶೈ.ಮ.ವಿ.ಸ.2:5 (2025-26)

ವಿಷಯ: ಶಿರ್ಡಿ ಸಾಯಿ ಡಿಗ್ರಿ ಕಾಲೇಜು, ಕಾರ್ಕಳ ಎಂಬ ವಿದ್ಯಾಸಂಸ್ಥೆಯ ಹೆಸರು ಬದಲಾವಣೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಶೈ.ಮ.ವಿ.ಸ.2:6 (2025-26)

ವಿಷಯ: ಶೈಕ್ಷಣಿಕ ವರ್ಷ 2026-27ನೇ ಸಾಲಿನ ಹೊಸ ಕಾಲೇಜುಗಳ ಸಂಯೋಜನೆ ಬಗ್ಗೆ.

**ನಿರ್ಣಯ:** ಪ್ರೆಸ್ಟೀಜ್ ಸ್ಕೂಲ್ ಆಫ್ ಮ್ಯಾನೇಜ್ಮೆಂಟ್ ಆಂಡ್ ಇನ್ನೋವೇಶನ್, ಜಪ್ಪಿನಮೊಗರು, ಮಂಗಳೂರು ಇದನ್ನು ಹೊರತು ಪಡಿಸಿ ಉಳಿದ ಹೊಸ ಕಾಲೇಜುಗಳ ಸಂಯೋಜನೆಗೆ ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳನ್ನು ಪರಿಶೀಲಿಸಿ, ಸದರಿ ಸಮಿತಿಗಳು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2026-27ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಮಂಜೂರಾತಿ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲು ನಿರ್ಣಯಿಸಲಾಯಿತು

ಕಾರ್ಯಸೂಚಿ ಸಂಖ್ಯೆ: ಸಿಡಿಸಿ:ಶೈ.ಮ.ವಿ.ಸ.2:7 (2025-26)

ವಿಷಯ: ಹಾರ್ವರ್ಡ್ ಇನ್ಸ್ಟಿಟ್ಯೂಟ್ ಆಫ್ ಫೈರ್ ಅಂಡ್ ಸೇಫ್ಟಿ ಇಂಜಿನಿಯರಿಂಗ್, ಕಂಕನಾಡಿ, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸ್ಥಳ ಬದಲಾವಣೆ ಬಗ್ಗೆ.

**ನಿರ್ಣಯ:** ಸದರಿ ಕಾಲೇಜಿನ ಸ್ಥಳ ಬದಲಾವಣೆಗೆ ಸಂಬಂಧಿಸಿದಂತೆ ಕಟ್ಟಡ ಸುರಕ್ಷತೆ/ಅಗ್ನಿ ಸುರಕ್ಷತೆ/ಭೂ ದಾಖಲೆ/30 ವರ್ಷಗಳ ಅವಧಿಗೆ ಸಬ್ ರಿಜಿಸ್ಟ್ರಾರ್ ಕಛೇರಿಯಿಂದ ದೃಢೀಕರಿಸಲ್ಪಟ್ಟ ಲೀಸ್ ಡೀಡ್ ದಾಖಲೆಗಳನ್ನು 31ನೇ ಜನವರಿ 2026 ರೊಳಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸದಿದ್ದಲ್ಲಿ ಸರ್ಕಾರದ ಆದೇಶದಂತೆ ವಿಶ್ವವಿದ್ಯಾನಿಲಯದ ಹಂತದಲ್ಲಿಯೇ ಪ್ರಸ್ತಾವನೆಯನ್ನು ತಿರಸ್ಕರಿಸಲು ನಿರ್ಣಯಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಶೈ.ಮ.ವಿ.ಸ.2:8 (2025-26)

ವಿಷಯ: ಮುಖ್ಯ ಛಾಯಾಗ್ರಾಹಕ ಹುದ್ದೆಯ ಸೃಜನೆಗೆ ಸಂಬಂಧಿಸಿದ ಕರಡು ಪರಿನಿಯಮದ ಅನುಮೋದನೆ ಬಗ್ಗೆ - ಕರಡು ಪರಿನಿಯಮದಲ್ಲಿ ಸರ್ಕಾರದ ನಿರ್ದೇಶನಗಳನ್ನು ಅಳವಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಕಾರ್ಯಸೂಚಿ ಸಂಖ್ಯೆ: ಸಿಬ್ಬಂದಿ:ಶೈ.ಮ.ವಿ.ಸ.2:9 (2025-26)

ವಿಷಯ: ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಮಂಜೂರಾಗಿರುವ ಪ್ರಯೋಗಾಲಯ ಸಹಾಯಕ ಹುದ್ದೆಗಳಿಂದ ಶೇಕಡ 30 ಹುದ್ದೆಗಳನ್ನು ಹಿರಿಯ ಪ್ರಯೋಗಾಲಯ ಸಹಾಯಕ ಹುದ್ದೆಯನ್ನಾಗಿ ಪರಿವರ್ತಿಸುವ ಬಗ್ಗೆ - ಕರಡು ಪರಿನಿಯಮದಲ್ಲಿ ಸರ್ಕಾರದ ನಿರ್ದೇಶನಗಳನ್ನು ಅಳವಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಇತರ ವಿಷಯಗಳು:**

**1)** **UI GreenMatric World University Ranking-2025** ನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯವು ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾನಿಲಯಗಳಲ್ಲಿ ಪ್ರಥಮ ಸ್ಥಾನವನ್ನು, ದೇಶದಲ್ಲಿ ತೃತೀಯ ಸ್ಥಾನವನ್ನು ಹಾಗೂ ಪ್ರಪಂಚದಲ್ಲಿ 127ನೇ ಸ್ಥಾನವನ್ನು ಗಳಿಸಿರುವ ಹೆಮ್ಮೆಯ ವಿಷಯವನ್ನು ಶೈಕ್ಷಣಿಕ ಮಂಡಳಿಯ ಗಮನಕ್ಕೆ ತರಲಾಯಿತು. ಈ ಶ್ರೇಯಾಂಕವನ್ನು ದಾಖಲಿಸಲು ವಿಶೇಷ ಆಸಕ್ತಿ ವಹಿಸಿದ IQAC ಘಟಕದ ಪ್ರಯತ್ನವನ್ನು ಶ್ಲಾಘಿಸಲಾಯಿತು.

**2)** ಇತ್ತೀಚೆಗೆ ಭೊಪಾಳದಲ್ಲಿ ನಡೆದ ನೈರುತ್ಯ ವಲಯ ಅಂತರ ವಿಶ್ವವಿದ್ಯಾನಿಲಯ ಪುರುಷರ ವೈಟ್ ಲಿಫ್ಟಿಂಗ್ ನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯವು ರನ್ನರ್ಸ್ ಅಪ್ ಪ್ರಶಸ್ತಿ ಹಾಗೂ ಮೂಡಬಿದಿರೆಯಲ್ಲಿ ನಡೆದ ಅಖಿಲ ಭಾರತ ಅಂತರ ವಿಶ್ವವಿದ್ಯಾನಿಲಯ ಅಥ್ಲೆಟಿಕ್ಸ್ ಕ್ರೀಡಾ ಕೂಟದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯವು ಹಲವಾರು ಪದಕಗಳೊಂದಿಗೆ ಪುರುಷರ ವಿಭಾಗದಲ್ಲಿ ರನ್ನರ್ಸ್ ಅಪ್, ಮಹಿಳಾ ವಿಭಾಗದಲ್ಲಿ ತೃತೀಯ ಸ್ಥಾನವನ್ನು ಹಾಗೂ **Overall Championship** ನಲ್ಲಿ ಅಖಿಲ ಭಾರತ ಮಟ್ಟದಲ್ಲಿ ದ್ವಿತೀಯ ಸ್ಥಾನವನ್ನು ಪಡೆದಿರುವ ಕ್ರೀಡಾ ಪಟುಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿ ಅಭಿನಂದಿಸಲಾಯಿತು.

**3)** ವಿಶ್ವವಿದ್ಯಾನಿಲಯದ 44ನೇ ವಾರ್ಷಿಕ ಘಟಿಕೋತ್ಸವವನ್ನು ಮಾರ್ಚ್ 2ನೇ ವಾರದಲ್ಲಿ ನಡೆಸಲು ಅನುಕೂಲವಾಗುವಂತೆ ಸೂಕ್ತ ಸಿದ್ಧತೆಗಳನ್ನು ನಡೆಸುವಂತೆ ಘನತೆವೆತ್ತ ಕುಲಾಧಿಪತಿಗಳು ಸೂಚಿಸಿರುವುದಾಗಿ ಸಭೆಗೆ ತಿಳಿಸಲಾಯಿತು.

4) ಪದವಿ ತರಗತಿಗಳ ಸೆಮಿಸ್ಟರ್ ಪರೀಕ್ಷೆಗಳು ವ್ಯವಸ್ಥಿತವಾಗಿ ನಡೆಯುತ್ತಿದ್ದು, ತ್ವರಿತವಾಗಿ ಫಲಿತಾಂಶ ಪ್ರಕಟಿಸುವ ನಿಟ್ಟಿನಲ್ಲಿ ನಾಲ್ಕು ಮೌಲ್ಯಮಾಪನ ಕೇಂದ್ರಗಳಲ್ಲಿ ಮೌಲ್ಯಮಾಪನ ಕಾರ್ಯವನ್ನು ಪ್ರಾರಂಭಿಸಲಾಗುವುದೆಂದು ಸಭೆಗೆ ತಿಳಿಸಲಾಯಿತು.

5) ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಪದವಿ ಪೂರೈಸಿದ ಎಲ್ಲಾ ವಿದ್ಯಾರ್ಥಿಗಳಿಗೂ ಮುದ್ರಿತ ಕ್ರೋಢೀಕೃತ ಅಂಕಪಟ್ಟಿಯನ್ನು ವಿತರಿಸಲಾಗಿರುವುದಾಗಿ ಸಭೆಗೆ ತಿಳಿಸಲಾಯಿತು. ಈ ಬಗ್ಗೆ ಖಾಸಗಿ/ಅನುದಾನಿತ ಕಾಲೇಜುಗಳ ಪ್ರಾಂಶುಪಾಲರ ಪರವಾಗಿ ಶೈಕ್ಷಣಿಕ ಮಂಡಳಿಯ ಸದಸ್ಯರಾದ ಡಾ. ವಿನ್ಸೆಂಟ್ ಆಳ್ವರವರು ವಿಶ್ವವಿದ್ಯಾನಿಲಯದ ಆಡಳಿತದ ಮುತುವರ್ಜಿಯನ್ನು ಪ್ರಶಂಸಿಸಿದರು.

6) UUCMS ನಲ್ಲಿ ವಿದ್ಯಾರ್ಥಿಗಳ ಹಾಜರಾತಿ ದಾಖಲಿಸುವ ಕಾರ್ಯವನ್ನು ಕಾಲೇಜುಗಳ ಪ್ರಾಂಶುಪಾಲರೇ ನಿರ್ವಹಿಸುವುದರಿಂದ ವಿಶ್ವವಿದ್ಯಾನಿಲಯದ

ಮಟ್ಟದಲ್ಲಿ ಯಾವುದೇ ರೀತಿಯ ತಿದ್ದುಪಡಿಗೆ ಅವಕಾಶ ಇರುವುದಿಲ್ಲ. ಆದುದರಿಂದ ಪ್ರಾಂಶುಪಾಲರುಗಳು ಈ ಸಂಬಂಧವಾಗಿ ಯಾವುದೇ ವಿದ್ಯಾರ್ಥಿಗಳನ್ನು ವಿಶ್ವವಿದ್ಯಾನಿಲಯಕ್ಕೆ ಕಳುಹಿಸದಂತೆ ಸೂಚಿಸಲಾಯಿತು.

7) ಮುಂದಿನ ಸಾಲಿನಿಂದ UUCMS ಸಹಾಯದೊಂದಿಗೆ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಡಿಜಿಟಲ್ ಮೌಲ್ಯಮಾಪನ ನಡೆಸಲು ನಿರ್ಧರಿಸಲಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ಮೌಲ್ಯಮಾಪಕರಿಗೆ ತರಬೇತಿಯನ್ನು ನೀಡಲು ನಿರ್ಧರಿಸಲಾಗಿದೆ ಎಂದು ಸಭೆಗೆ ತಿಳಿಸಲಾಯಿತು. ಈಗಾಗಲೇ ಎಂ.ಬಿ.ಎ. ಕಾರ್ಯಕ್ರಮದ ಉತ್ತರ ಪತ್ರಿಕೆಗಳ ಡಿಜಿಟಲ್ ಮೌಲ್ಯಮಾಪನ ನಡೆಸಿದ್ದು, ಮುಂದಕ್ಕೆ ಪದವಿ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಡಿಜಿಟಲ್ ಮೌಲ್ಯಮಾಪನ ನಡೆಸಲಾಗುವುದೆಂದು ಸಭೆಗೆ ತಿಳಿಸಲಾಯಿತು.

ಕೊನೆಯದಾಗಿ ಕುಲಸಚಿವರು ಸದಸ್ಯರುಗಳ ಸಲಹೆ ಸಹಕಾರಗಳಿಗೆ ಹಾಗೂ ಭಾಗವಹಿಸಿದ ಎಲ್ಲಾ ಸದಸ್ಯರಿಗೆ, ಅಧಿಕಾರಿ-ಸಿಬ್ಬಂದಿಗಳಿಗೆ, ಮಾಧ್ಯಮದವರಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| **ಸಹಿ/-** | **ಸಹಿ/-** |
| **ಕುಲಸಚಿವರು** | **ಕುಲಪತಿಗಳು** |